# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 463 |
| ಸದಸ್ಯರ ಹೆಸರು | ಶ್ರೀ ಎಸ್.ವ್ಹಿ. ಸಂಕನೂರ |
| ಉತ್ತರಿಸಬೇಕಾದ ದಿನಾಂಕ | 13-12-2018 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಮಂತ್ರಿಗಳು |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಮಹಾವಿದ್ಯಾಲಯಗಳ ಒಟ್ಟು ಸಂಖ್ಯೆ 413 (ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ನೀಡಲಾಗಿದೆ) |
| ಆ) | ಈ ಪದವಿ ಮಹಾವಿದ್ಯಾಲಯಗಳಲ್ಲಿ ಎಷ್ಟು ಜನ ಗ್ರೇಡ್-1 ಹಾಗೂ ಗ್ರೇಡ್-2 ಮತ್ತು ಪ್ರಭಾರಿ ಪ್ರಾಚಾರ್ಯರು ಕಾರ್ಯನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು) | ಇಲಾಖಾ ವ್ಯಾಪ್ತಿಯ 413 ಕಾಲೇಜುಗಳ ಪೈಕಿ 410 ಕಾಲೇಜುಗಳಿಗೆ ಮಾತ್ರ ಪ್ರಾಂಶುಪಾಲರ ಹುದ್ದೆ ಮಂಜೂರಾಗಿರುತ್ತದೆ.<br>ಅವುಗಳಲ್ಲಿ 07 ಸರ್ಕಾರಿ ಪದವಿ ಕಾಲೇಜುಗಳಲ್ಲಿ ಗ್ರೇಡ್-2 ಪ್ರಾಂಶುಪಾಲರು 05 ಸರ್ಕಾರಿ ಪದವಿ ಕಾಲೇಜುಗಳಲ್ಲಿ ಗ್ರೇಡ್-1 ಪ್ರಾಂಶುಪಾಲರು ಕಾರ್ಯನಿರ್ವಹಿಸುತ್ತಿದ್ದಾರೆ. ಉಳಿದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರ ಕಾರ್ಯನಿರ್ವಹಿಸುತ್ತಿದ್ದಾರೆ. (ವಿವರಗಳನ್ನು ಅನುಬಂಧ-2 ರಲ್ಲಿ ನೀಡಲಾಗಿದೆ) |
| ಇ) | ಪೂರ್ಣಾವಧಿ ಪ್ರಾಚಾರ್ಯರನ್ನು (ಗ್ರೇಡ್-1 ಹಾಗೂ ಗ್ರೇಡ್-2) ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಯಾವಾಗ ಪ್ರಾರಂಭ ಮಾಡಲಾಗುವುದು; ಪ್ರಭಾರಿ ಪ್ರಾಂಶುಪಾಲರಿಗೆ ಸರ್ಕಾರದ ಇತರೆ ಇಲಾಖೆಗಳಲ್ಲಿ ನೀಡುವಂತೆ ಪ್ರಭಾರಿ ಭತ್ಯೆಯನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಎಷ್ಟು ಭತ್ಯೆಯನ್ನು ನೀಡಲಾಗುತ್ತಿದೆ; | ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಾವಳಿಗಳಂತೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ದಿನಾಂಕ : 20.08.2018 ರ ಸಂಖ್ಯೆ: ಇಡಿ 121 ಡಿಸಿಇ 2018 ರಲ್ಲಿ ಕರಡು ನಿಯಮಗಳನ್ನು ರೂಪಿಸಿ, ಪ್ರಕಟಿಸಲಾಗಿದ್ದು, ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ, ಇಲಾಖೆಗೆ ಸಲ್ಲಿಸಲಾಗಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಲಾಗಿದೆ. ಅಂತಿಮ ನಿಯಮವನ್ನು ಹೊರಡಿಸುವ ಪ್ರಗತಿಯಲ್ಲಿದೆ.<br>ಸರ್ಕಾರದ ಪದವಿ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರು ಪ್ರಾಧ್ಯಾಪಕರುಗಳಿಗೆ ಪ್ರಭಾರ ಭತ್ಯೆ ನೀಡಲಾಗುತ್ತಿಲ್ಲ. |
| ಈ) | ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಬೋಧಕೇತರ ಸಿಬ್ಬಂದಿಗೆ ಪ್ರಭಾರಿ ಭತ್ಯೆಯನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ ನೀಡಲಾಗುತ್ತಿರುವ ಭತ್ಯೆ ಎಷ್ಟು? | ತಮ್ಮ ಹುದ್ದೆಯ ಕಾರ್ಯಭಾರದ ಜೊತೆಗೆ ಹೆಚ್ಚುವರಿಯಾಗಿ ಇನ್ನೊಂದು ಹುದ್ದೆಯ ಪ್ರಭಾರ ವಹಿಸಿಕೊಂಡು ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಪದವಿ ವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗಳು ಪ್ರಭಾರ ಭತ್ಯೆಯನ್ನು ಪಡೆಯಲು ನಿಯಮಾನುಸಾರ ಅರ್ಹರಾಗಿರುತ್ತಾರೆ. ಕ.ನಾಸೇ.ನಿಯಮಾವಳಿಗಳ |